ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ/ವಾರ್ಡ್ ಸಮಿತಿ ಸಹಾಯಕಅಭಿಯಂತರರಕಛೇರಿ ವಾರ್ಡ್ ಸಂಖ್ಯೆ: 137 ಜೆ.ಜೆ.ಆರ್ ನಗರ ಬೆಂಗಳೂರು

*******************************************************************************

ಸಂಖ್ಯೆ: w-137/Committee/Proceding -25/2021-22 dt 21-10-2021

# ವಾರ್ಡ್ ಹಂತದ ಸಮಿತಿ ಸಭೆ

## ವಾರ್ಡ್ ಸಂಖ್ಯೆ: 137

**21-10-2021** ರಂದು ಬೆಳಿಗ್ಗೆ **11.30** ಘಂಟೆಗೆ ವಾರ್ಡ್ ಸಂಖ್ಯೆ: **137** ರಾಯಪುರಂ ವಾರ್ಡ್ ಹಂತದ ಸಮಿತಿ ಸಭೆಯನ್ನು ಶ್ರೀ. ಮೊಹಮದ್ ಜಾವೀದ್. ಸಹಾಯಕ ಕಾರ್ಯಪಾಲಕ ಅಭಿಯಂತರರು(ಕಾಮಗಾರಿ) ವಸಂತನಗರ ಉಪ ವಿಭಾಗ ಬಿ.ಬಿ.ಎಂ.ಪಿ ಹಾಗೂ ಅಧ್ಯಕ್ಷರು ಮತ್ತು ವಾರ್ಡ್‌ನ ನೋಡೆಲ್ ಅಧಿಕಾರಿ ವಾರ್ಡ್ ಸಂಖ್ಯೆ 137 ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಚುನಾಯಿತ ಪ್ರತಿನಿಧಿ ಅಧಿಕಾರ ಅವಧಿಯು ದಿನಾಂಕ: 10-09-2020ಕ್ಕೆ ಮುಕ್ತಾಯವಾಗಿದ್ದು, ಬಿ.ಬಿ.ಎಂ.ಪಿಯ ಪ್ರತಿ ವಾರ್ಡ್‌ಗೆ ನೋಡೆಲ್ ಅಧಿಕಾರಿ ನೇಮಕಾತಿ ಮತ್ತು ವಾರ್ಡ್ ಹಂತದ ಸಮಿತಿ ರಚಿಸಿದ್ದು. ವಾರ್ಡ್‌ಗೆ ಸಂಬಂಧಿಸಿದಂತೆ ಸಾರ್ವಜನಿಕರ ಹಿತರಕ್ಷಣೆ ಗಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಗೆ ಅಹ್ವಾನಿಸಿದ ಮಾನ್ಯ ಅಧ್ಯಕ್ಷರಿಗೆ ಮತ್ತು ಸಮಿತಿಯ ಸದಸ್ಯರುಗಳಿಗೆ ಸಮಿತಿಯ ಕಾರ್ಯದರ್ಶಿ ಸಭೆಗೆ ಸ್ವಾಗತ ಕೋರುತ್ತಾ ಸಮಿತಿಯ ಅಧ್ಯಕ್ಷರಾದ ಶ್ರೀ.ಮೊಹಮದ್ ಜಾವೀದ್ ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು ಹಾಗೂ ಈ ಹಿಂದಿನ ಸಭೆಯ ನಡಾವಳಿಯ ನಿರ್ಣಯಗಳ ಬಗ್ಗೆ ಕೈಗೊಂಡ ಕಾರ್ಯವನ್ನು ಪರಿಶೀಲಿಸಲಾಯಿತು.

### ಸಭೆಯಲ್ಲಿಚರ್ಚಿಸಲಾದ ವಿಷಯಗಳು

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಿ ಕೈಗೊಂಡ ನಿರ್ಣಗಳ ಅನುಷ್ಠನದ ಬಗ್ಗೆ ಸಭೆಯಲ್ಲಿ ಚರ್ಚಿಸಿ ಸಭೆಯನ್ನು ಪ್ರಾರಂಭಿಸಲಾಯಿತು

ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ವಿವರ ಸಭೆಗೆ ನೀಡುವಂತೆ ಕೋರಿದರು ಹಾಗೂ ಅವಶ್ಯಕವಾಗಿ ನಡೆಯಬೇಕಾದ ಕಾಮಗಾರಿಗಳ ಬಗ್ಗೆ ವಿವರಣೆ ಕೋರಿದರು

ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್‌ನಲ್ಲಿ ನಡೆಯುತ್ತಿರುವ ಕಾಮಗಾರಿಗಳ ವಿವರವನ್ನು ನೀಡಿದರು.

ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳು ಕಂಡುಬಂದಿರುವ ಬಗ್ಗೆ ಸಭೆಯಲ್ಲಿ ಪ್ರಸ್ತಪಿಸಿದರು.ಈ ವಿಷಯದ ಬಗ್ಗೆ ಮಾನ್ಯ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆಯಲ್ಲಿ ಗುಂಡಿಗಳನ್ನು ಮುಚ್ಚಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ಹಲವು ದಿನಗಳಿಂದ ಮಳೆಯ ಪ್ರಮಾಣದ ಹೆಚ್ಚಗಿದ್ದು ವಾರ್ಡ್ ವ್ಯಾಪ್ತಿಯಲ್ಲಿ ಕಟ್ಟಡ ಕುಸಿತ ಹಾಗೂ ಮಳೆ ಹಾನಿಯ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು

ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್ ವ್ಯಾಪ್ತಿಯಲ್ಲಿ ಶೀಥಿಲಗೊಂಡ ಕಟ್ಟಡವಿರುವುದಿಲ್ಲ ಹಾಗೂ ಮಳೆಗಾಲದಲ್ಲಿ ರಾತ್ರಿ ಪಾಳಿಯಲ್ಲಿ ಕೆಲಸ ಗಾರರನ್ನು ಮತ್ತು ಟ್ರಾಕ್ಟರ್ ಉಪಯೋಗಿಸಿಕೊಂಡು ಕಾರ್ಯನಿರ್ವಹಿಸುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು: ಬಿಡಬ್ಲೂಎಸ್‌ಎಸ್‌ಬಿ ಕಛೇರಿಗೆ ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರಿಂದ ಬಂದ ದೂರಿನ ಪುಸ್ತಕವನ್ನು ಪರಿಶೀಲಿಸಿದರು ಹಾಗೂ ಕೈಗೊಂಡ ಕ್ರಮಗಳ ವಿವರವನ್ನು ಕೋರಿದರು

ಬಿಡಬ್ಲೂಎಸ್‌ಎಸ್‌ಬಿ ಅಧಿಕಾರಿಗಳು ವಾರ್ಡ್ 137 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಮಾಡುವುದಾಗಿ ತಿಳಿಸಿದರು.

ಅಧ್ಯಕ್ಷರು ಬೆಸ್ಕಂ ಕಛೇರಿಗೆ ವಾರ್ಡ್ 137 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ತಿಳಿಸುವಂತೆ ಸಭೆಯಲ್ಲಿ ತಿಳಿಸಿದರು.

-3

ಬೆಸ್ಕಂ ಅಧಿಕಾರಿಯವರು ವಾರ್ಡ್ 137ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರುಗಳ ವಿವರ ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು.

ಕಮಿಟಿ ಸದಸ್ಯರು ವಾರ್ಡ್ 137ರ ವ್ಯಾಪ್ತಿಯಲ್ಲಿ ಬರುವ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಕಸ ಹಾಗೂ ಇತರೆ ತ್ಯಾಜ್ಯ ಹಾಕುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು

ಕಿರಿಯ ಆರೊಗ್ಯ ಪರೀವಿಷಕರನ್ನು ವಿಷಯದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಕಿರಿಯ ಆರೋಗ್ಯ ಪರಿವೀಕ್ಷಕರು ಸದರಿ ವಿಷಯವು ಬಂದಿದ್ದು ಸದರಿ ಸ್ಥಳಗಳಲ್ಲಿ ತ್ಯಾಜ್ಯ ಎಸೆಯುವವರ ಬಗ್ಗೆ ನಿಗವಹಿಸುವಂತೆ ಮಾರ್ಷಲ್‌ಗಳಿಗೆ ತಿಳಿಸಿ ಬಿ.ಬಿ.ಎಂ.ಪಿ ನಿಯಮನುಸಾರ ಕ್ರಮ ಕೈಗೊಳ್ಳು ಸಭೆಯಲ್ಲಿ ಹಾಜರಾಗಿದ್ದ ಮಾರ್ಷಲ್‌ಗಳಿಗೆ ಸೂಚಿಸಿದರು.

ಮಾನ್ಯ ಅಧ್ಯಕ್ಷರು ಕಂದಾಯ ಅಧಿಕಾರಿಗಳಿಗೆ ಮತದಾನದ ಗುರ್ತಿನ ಚೀಟಿ ವಿತರಿಸುವ ಮತ್ತು ಹೊಸ ಮತದಾರರ ಗುರ್ತಿನ ಚೀಟಿ ನೋಂದಣಿಯ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು

ಕಂದಾಯ ಅಧಿಕಾರಿಗಳು ಗುರ್ತಿನ ಚೀಟಿಯನ್ನು ಭೂತ್ ಮಟ್ಟಡದ ಏಜೆಂಟ್ ಗಳಿಂದ ವಿತರಿಸಲಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಬಗ್ಗೆ ಸಭೆಯಲ್ಲಿ ವಿವರಣೆ ಮತ್ತು ಕೈಗೊಂಡಿರುವ ಕ್ರಮದ ಬಗ್ಗೆ ಸಭೆಯಲ್ಲಿ ವಿವರಣೆ ನೀಡಿದರು.

ಆರೋಗ್ಯ ಪರಿವೀಕ್ಷಕರು ವಾಡ್-137 ಮತ್ತು ಕಂದಾಯ ಪರಿವೀಕ್ಷರು ವಾರ್ಡ್-137 ರವರುಗಳಿಗೆ ಕೋವಿಡ್-19ಪೂರ್ಣ ಪ್ರಮಾಣದಲ್ಲಿ ತಗ್ಗಿದ್ದು ವಾರ್ಡ್ ನಲ್ಲಿ ಲಸಿಕೆ ಅಭಿಯಾನ ಕಾರ್ಯಕ್ರಮ ಉತ್ತಮ ರೀತಿಯಲ್ಲಿ ಸಾರ್ವಜನಕರು ಸ್ವಂಧಿಸುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು

ಅಧ್ಯಕ್ಷರು ವಾರ್ಡ್‌ನಲ್ಲಿ ಕಸ ವಿಲೇವಾರಿಯ ಬಗ್ಗೆ ಹಲವು ದೂರುಗಳ ಬಗ್ಗೆ ಸಭೆಯಲ್ಲಿ ಕೋರಿದರು ಹಾಗೂ ಜೆ.ಜೆ.ಆರ್ ನಗರ ಮುಖ್ಯರಸ್ತೆಯ ಬಿ.ಬಿ.ಎಂ.ಪಿ ಜಾಗದಲ್ಲಿ ತ್ಯಾಜ್ಯ ಸುರಿಯುತ್ತಿರುವ ಬಗ್ಗೆ ಸಭೆಯಲ್ಲಿ ಆರೋಗ್ಯ ಪರಿವೀಕ್ಷಕರನ್ನು ವಿವರಣೆ ಕೋರಿದರು ಹಾಗೂ ಗುತ್ತಿಗೆ ಕಾರ್ಮಿಕರು ಹಾಗೂ ಬಿ.ಬಿ.ಎಂ.ಪಿ ನೌಕರರ ಹಾಜರಾತಿ ಪುಸ್ತಕ ಮತ್ತು ಆಟೋಗಳ ಹಾಜರಾತಿಯ ಬಗ್ಗೆ ವಿವರಣೆ ಕೋರಿದರು.

ಕಿರಿಯ ಆರೋಗ್ಯ ಪರಿವೀಕ್ಷರು ನೌಕರರ ಹಾಜರಾತಿ ಪುಸ್ತಕ ಮತ್ತು ಆಟೋಗಳ ಹಾಜರಾತಿ ಪುಸ್ತಕವನ್ನು ಸಭೆಯಲ್ಲಿ ಮಂಡಿಸಿ ಕಸ ವಿಲೇವಾರಿಯು ಒಂದು ವಾರದಿಂದ ಹೆಚ್ಚಿನ ಪ್ರಮಾಣದಲ್ಲಿ ಕಸ ಉತ್ಪದನೆಯಾಗುತ್ತಿದ್ದು ಕಸ ವಿಲೇವಾರಿಯ ಘಟಕಗಳಲ್ಲಿ ಹೆಚ್ಚಿನ ಪ್ರಮಾಣದ ಕಂಪ್ಯಾಕ್ಟರ್‌ಗಳು ಕಸ ವಿಲೇವಾರಿಗೆ ಬರುತ್ತಿದ್ದು ಅಲ್ಪ ಪ್ರಮಾಣದ ಕಸ ವಿಲೇವಾರಿ ತೊಂದರೆಯಾಗಿರುವುದನ್ನು ಸಭೆಯಲ್ಲಿ ಮಂಡಿಸಿದರು.

ಮಾನ್ಯ ಅಧ್ಯಕ್ಷರು ಮಾರ್ಷಲ್‌ಗಳು ವಿಧಿಸಿದ ದಂಡದ ಬಗ್ಗೆ ವಿವರಣೆ ಕೋರಿದರು.

ವಾರ್ಡ್-137 ವಾರ್ಡ್‌ನ ಮರ್ಷಲ್ ವಾರ್ಡ್ ವ್ಯಾಪ್ತಿಯಲ್ಲಿ ಕಸ ಸುರಿಯುತ್ತಿರುವರನ್ನು ಹುಡುಕಿ ದಂಡ ವಿಧಿಸುತ್ತಿದ್ದು, ಕೆಲವು ಕಿಡಿಗೆಡಿಗಳು ದಂಡ ವಿಧಿಸುವ ಸಂಧರ್ಬದಲ್ಲಿ ಹಲ್ಲೆ ಮಾಡಲು ಮುಂದಗಿದ್ದು ಅವರ ಮೇಲೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

## ಹಾಜರಿದ್ದ ವಾರ್ಡ್ ಕಮೀಟಿ ಸದಸ್ಯರು

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮೀತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಮೊಹಮದ್ ಜಾವೀದ್. ಸಹಾಯಕ ಕಾರ್ಯಪಾಲಕ ಅಭಿಯಂತರರು(ವಸಂತನಗರ ಉಪ ವಿಭಾಗ) ಬಿ.ಬಿ.ಎಂ.ಪಿ, ದೂ. ಸಂಖ್ಯೆ: 9845720286 | ಅಧ್ಯಕ್ಷರು ಮತ್ತು ವಾರ್ಡ್‌ನ ನೂಡಲ್ ಅಧಿಕಾರಿ | [signature] |
| 2 | ಶ್ರೀ ಗಿರಿಧರ್ ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 137 ಬಿ.ಬಿ.ಎಂ.ಪಿ, ದೂ. ಸಂ 8618436036 | ಸದಸ್ಯ ಕಾರ್ಯದರ್ಶಿ | [signature] |
| 3 | ಗೀತಾ ಹೆಚ್. ದೂ. 9986537126 ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ –137 | ಸದಸ್ಯರು | [signature] |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ (ಕಾಮಗಾರಿ) ಜೆ.ಜೆ.ಆರ್ ನಗರ ಉಪ ವಿಭಾಗದ ರವರ ಪ್ರತಿನಿಧಿ ಶ್ರೀ ಬಾಬು (ಕೆಲಸ ಪರಿವೀಕ್ಷಕರು) ವಾರ್ಡ್–137, ದೂ. 9342582372 | ಸದಸ್ಯರು | N.B [signature] |
| 5 | ಆರೋಗ್ಯಾಧಿಕಾರಿಗಳು, ಚಾಮರಜಪೇಟೆ ವಿಭಾಗ ರವರ ಪ್ರತಿನಿಧಿ ಬಸವಲಿಂಗಯ್ಯ ದೂ. 9686418488 | ಸದಸ್ಯರು | G.V Bas [signature] SHI |
| 6 | ಶ್ರೀ ಸಿ. ಆರ್ ರವಿ ಪ್ರಸಾದ್ ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ. ದೂ. 9845802912 | ಸದಸ್ಯರು | [signature] |
| 7 | ಶ್ರೀ ರಿಜ್ವಾನ್, ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ. ದೂ. 9845262860 | ಸದಸ್ಯರು | Rizwan [signature] |
| 8 | ಶ್ರೀ ರಾಜು, ದೂ.. 7676512877 ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ. | ಸದಸ್ಯರು | — |
| 9 | ಶ್ರೀಮತಿ ಆಶಾ. ದೂ. 9731317223 ಕಂದಾಯ ಪರಿವೀಕ್ಷಕರು | ಸದಸ್ಯರು | [signature] RI-137 |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರ ಪ್ರತಿನಿಧಿ | ಸದಸ್ಯರು | [signature] |
| 11 | ಸಹಾಯಕ ಕಾರ್ಯಪಾಲಕ ಅಭಿಯಂತರರ (ಬಿಡಬ್ಲೂ.ಎಸ್.ಎಸ್.ಬಿ) ರವರ ಪ್ರತಿನಿಧಿ ಶ್ರೀ ಕುಮಾರ್ ಸ್ವಾಮಿ, ದೂ. 9060341644 | ಸದಸ್ಯರು | [signature] 22/10/21 |
| 12 | ಸಹಾಯಕ ಕಾರ್ಯ ಪಾಲಕ ಅಭಿಯಂತರರು (ಬೆಸ್ಕಂ) ರವರ ಪ್ರತಿನಿಧಿ. ದೂ. 9449840364 | ಸದಸ್ಯರು | [signature] |

[signature]
**ಕಾರ್ಯದರ್ಶಿಗಳು**
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 137
ವಾರ್ಡ್ ಹಂತದ ಸಮೀತಿ

[signature]
ಅಧ್ಯಕ್ಷರು
**ಹಾಗೂ ನೋಡಲ್ ಅಧಿಕಾರಿ**
**ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 137**